## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ನರಸಿಂಗಪ್ಪ, ಕಿರಿಯ ಇಂಜಿನಿಯರ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮಾನ್ವಿ ಇವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ವಿಚಾರಣೆ- ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ-ಆದೇಶ.

**ಓದಲಾಗಿದೆ.**

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಪತ್ರ ಸಂಖ್ಯೆ: Compt/uplok/GLB-8919/2017/ARE-5. Dated:16.8.2017.

2. ಮಾನ್ಯ ಉಪ ಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ12(3)ರನ್ವಯ ವರದಿ ಸಂಖ್ಯೆ: Compt/uplok/GLB-8919/2017/ARE-5, Dated:09.8.2017.

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರುರವರು ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ:16.8.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪಲೋಕಾಯುಕ್ತ-1ರವರ ದಿನಾಂಕ:09.8.2017 ರ ಲೋಕಾಯುಕ್ತ ಕಾಯ್ದೆ ಕಲಂ 12(3) ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ ಸರ್ಕಾರಕ್ಕೆ ಕಳುಹಿಸಿ, ಮಾನ್ಯ ಉಪಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರಂತೆ ಸಲ್ಲಿಸಿರುವ ವರದಿ ಹಾಗೂ ಸದರಿ ವರದಿಗೆ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಶ್ರೀ ಬಸವಪ್ರಭು ಸಾ:ಹರನಹಳ್ಳಿ ಗ್ರಾಮ, ಮಾನ್ವಿ ತಾಲ್ಲೂಕು ಇವರು ಶ್ರೀ ನರಸಿಂಗಪ್ಪ, ಕಿರಿಯ ಇಂಜಿನಿಯರ್ ಇವರ ವಿರುದ್ಧ ಲೋಕಾಯುಕ್ತಕ್ಕೆ ಸಲ್ಲಿಸಿದ್ದ ದೂರಿನಲ್ಲಿ ಹರನಹಳ್ಳಿ ಗ್ರಾಮದಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಕೈಗೊಳ್ಳಲಾದ ಕುಡಿಯುವ ನೀರಿನ ಯೋಜನೆ ಕಾಮಗಾರಿಯನ್ನು ಒಂದೂವರೆ ವರ್ಷದ ಹಿಂದೆ ನಿರ್ವಹಿಸಿದ್ದು ಓವರ್ ಹೆಡ್ ಟ್ಯಾಂಕ್‌ಗೆ ನೀರು ಸರಬರಾಜು ಆಗುತ್ತಿಲ್ಲವೆಂಬ ಬಗ್ಗೆ ಆರೋಪಿಸಿರುತ್ತಾರೆ. ಸದರಿ ದೂರಿನ ಕುರಿತು ಮಾನ್ಯ ಉಪಲೋಕಾಯುಕ್ತರು ಆರೋಪಿತರಾದ ಶ್ರೀ ನರಸಿಂಗಪ್ಪ, ಜೆ.ಇ ಇವರಿಂದ ವಿವರಣೆ ಪಡೆದಿದ್ದು, ನಂತರ ಪೋಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಕೊಪ್ಪಳ ಇವರಿಂದ ವರದಿ ಪಡೆದಿರುತ್ತಾರೆ. ಅಪಾಧಿತರು ಸಲ್ಲಿಸಿದ್ದ ವಿವರಣೆಯಲ್ಲಿ ಕಾಮಗಾರಿಯನ್ನು ಅಂದಾಜು ಪಟ್ಟಿಯನುಸಾರ ತೃಪ್ತಿಕರವಾಗಿ ದಿನಾಂಕ:3.7.2015 ರಂದು ಪೂರ್ಣಗೊಳಿಸಿ, ಸಂಕೇಶ್ವರ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ದಿ ಅಧಿಕಾರಿಯವರಿಗೆ ವರ್ಗಾಯಿಸಲಾಗಿದೆ ಎಂದು ತಿಳಿಸಿರುವುದು ಕಂಡು ಬರುತ್ತದೆ.

ಲೋಕಾಯುಕ್ತ ಪೊಲೀಸ್, ಕೊಪ್ಪಳ ಇವರು ಸಲ್ಲಿಸಿದ್ದ ವರದಿಯಲ್ಲಿ ತಿಳಿಸಿರುವಂತೆ ಕಾಮಗಾರಿಯನ್ನು ಅಂದಾಜು ವೆಚ್ಚ ರೂ.20,00,000/-ಗಳಿಗೆ ಟೆಂಡರ ಕರೆದಿದ್ದು, ಗುತ್ತಿಗೆದಾರರು ಕಾಮಗಾರಿಯನ್ನು ದಿನಾಂಕ:03.7.2015 ರಂದು ಪೂರ್ಣಗೊಳಿಸಿ, ಸಂಬಂಧಿಸಿದ ಗ್ರಾಮ ಪಂಚಾಯತ್‌ಗೆ ಹಸ್ತಾಂತರಿಸಿರುತ್ತಾರೆ. ಗುತ್ತಿಗೆದಾರರಿಗೆ ರೂ. 16,91,949/-ಗಳ ಹಣ ಪಾವತಿಯಾಗಿರುತ್ತದೆ. ಕಾಮಗಾರಿಯನ್ನು ಹಸ್ತಾಂತರಿಸಿದ ಒಂದು ವಾರ ಕೊಳವೆ ಬಾವಿಯಿಂದ ಪೈಪ್‌ಲೈನ್ ಮೂಲಕ ಓವರ್ ಹೆಡ್ ಟ್ಯಾಂಕ್‌ಗೆ ನೀರು ಸರಬರಾಜು ಆಗಿದ್ದು ನಂತರ ಕೊಳವೆ ಬಾವಿಯಲ್ಲಿ ನೀರಿನ ಕೊರತೆಯ ಕಾರಣ ಟ್ಯಾಂಕ್‌ಗೆ ನೀರು ಸರಬರಾಜು ಆಗಿರುವುದಿಲ್ಲ. ನಂತರ ಹಿಂದೆ ಅಸ್ತಿತ್ವದಲ್ಲಿದ್ದ ಸಣ್ಣ ಟ್ಯಾಂಕ್ ಮೂಲಕ ಗ್ರಾಮಕ್ಕೆ ನೀರು ಸರಬರಾಜು ಮಾಡಲಾಗುತ್ತಿದೆ ಎಂಬ ಮಾಹಿತಿಯು ಲಭ್ಯವಿರುತ್ತದೆ.

ಮಾನ್ಯ ಉಪಲೋಕಾಯುಕ್ತ-1ರವರು, ಸದರಿ ವರದಿಯನ್ನು ಪರಿಶೀಲಿಸಿ, ಕೊರೆಯಲಾದ ಕೊಳವೆ ಬಾವಿಯಲ್ಲಿ ನೀರು ಇರುವ ಬಗ್ಗೆ ಖಾತ್ರಿ ಪಡಿಸಕೊಳ್ಳದೇ ಕೊಳವೆ ಬಾವಿಯಿಂದ ಟ್ಯಾಂಕ್ ವರಗೆ ಪೈಪ್ ಲೈನ್ ಅಳವಡಿಸಿ, ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುತ್ತದೆಯೆಂದು ಇದಕ್ಕೆ ಶ್ರೀ ನರಸಿಂಗಪ್ಪ, ಜೆ.ಇ ಇವರು ಕಾರಣರಾಗಿರುತ್ತಾರೆಂದು ತಿಳಿಸಿ, ಅವರು ನೀಡಿರುವ ವಿವರಣೆಯು ಶಿಸ್ತು ನಡವಳಿಯನ್ನು ಕೈ ಬಿಡಲು ಸೂಕ್ತ ಸಮಧಾನಕರವಾಗಿರುವುದಿಲ್ಲವೆಂದು, ಸದರಿಯವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ ನಿಯಮ 3 (1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ ಸದರಿಯವರ ವಿರುದ್ಧ ವಿವರವಾದ ಇಲಾಖೆ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ತಮ್ಮ ಸಂಸ್ಥೆಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತ- 1 ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಲಾಗಿ, ಮಾನ್ವಿ ತಾಲ್ಲೂಕಿನ ಹರನಹಳ್ಳಿ ಗ್ರಾಮದಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಕೈಗೊಳ್ಳಲಾದ ಕುಡಿಯುವ ನೀರಿನ ಯೋಜನೆ ಕಾಮಗಾರಿಯಲ್ಲಿ ಕೊರೆಯಲಾಗಿದ್ದ ಕೊಳವೆ ಬಾವಿಯಲ್ಲಿ ಸೂಕ್ತ ಪ್ರಮಾಣದಲ್ಲಿ ನೀರು ಲಭ್ಯವಿರುವ ಬಗ್ಗೆ ಖಚಿತಪಡಿಸಿಕೊಳ್ಳದೆ ಕೊಳವೆ ಬಾವಿಯಿಂದ ವಾಟರ್ ಟ್ಯಾಂಕ್‌ವರಗೆ ಪೈಪ್‌ಲೈನ್ ಅಳವಡಿಸಿದ್ದು, ಸದರಿ ಪೈಪ್ ಲೈನ್ ನಿರುಪಯುಕ್ತವಾಗಿದ್ದರಿಂದ ಪೈಪ್ ಲೈನ್‌ಗೆ ಮಾಡಿದ ವೆಚ್ಚ ರೂ. 51,511/- ಗಳು , ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವುದು ಸ್ಪಷ್ಟವಾಗುತ್ತದೆ. ಇದಕ್ಕೆ ಶ್ರೀ ನರಸಿಂಗಪ್ಪ ಕಿರಿಯ ಇಂಜಿನಿಯರ್ ಇವರು ಜವಬ್ದಾರರಾಗಿದ್ದು, ಸದರಿಯವರು ಸರ್ಕಾರಿ ನೌಕರರಾಗಿದ್ದು ತಮ್ಮ ಕಾರ್ಯನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಪ್ರಾಮಾಣಿಕತೆ ಕರ್ತವ್ಯ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು, ಇದರಿಂದಾಗಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದು ಮೇಲ್ನೋಟಕ್ಕೆ ಸಾಭೀತಾಗುವಂತೆ ಕಂಡು ಬಂದಿರುತ್ತದೆ. ಆದ್ದರಿಂದ, ಸದರಿ ಆರೋಪಗಳ ಕುರಿತು ವಿವರವಾದ ಇಲಾಖೆ ವಿಚಾರಣೆ ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

## <u>ಆದೇಶ ಸಂಖ್ಯೆ:ಗ್ರಾಅಪ 90 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:04.9.2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ನರಸಿಂಗಪ್ಪ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮಾನ್ವಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು 1957ರ ನಿಯಮ-11 ರಂತೆ ನಡೆಸುವ ಸಲುವಾಗಿ ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 04/09/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.

7. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
9. ಶ್ರೀ ನರಸಿಂಗಪ್ಪ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮಾನ್ವಿ.
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
12. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.